### ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2017-18ನೇ ಸಾಲಿನ ಆರ್ಥಿಕ ವರ್ಷದಲ್ಲಿ ಲೆಕ್ಕ ಶೀರ್ಷಿಕೆ-3054-80-196-1-03-300 ಲಂಪ್‌ಸಮ್ ರಡಿ ಹಾಸನ ಜಿಲ್ಲೆ ಅರಸೀಕೆರೆ ಮತಕ್ಷೇತ್ರದ ವ್ಯಾಪ್ತಿಯ ಗ್ರಾಮೀಣ ರಸ್ತೆಗಳು ಹಾಗೂ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ/92/ವೆಚ್ಚ-6/2017 ದಿನಾಂಕ:16-5-2017.

**ಪ್ರಸ್ತಾವನೆ:**

ಹಾಸನ ಜಿಲ್ಲೆ ಅರಸೀಕೆರೆ ಮತಕ್ಷೇತ್ರದ ವ್ಯಾಪ್ತಿಯ ಗ್ರಾಮೀಣ ರಸ್ತೆಗಳು ಹಾಗೂ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಅನುದಾನ ಬಿಡುಗಡೆಗೊಳಿಸುವಂತೆ ಬಂದಿರುವ ಪ್ರಸ್ತಾವನೆಯನ್ನು ಗಮನಿಸಿದೆ.

ಮೇಲೆ ಓದಲಾದ-1 ರ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ::ಆಇ/92/ವೆಚ್ಚ-6/2017 ದಿನಾಂಕ:16-5-2017ರಲ್ಲಿ ಆರ್ಥಿಕ ಇಲಾಖೆಯು ಅರಸೀಕೆರೆ ವಿಧಾನ ಸಭಾ ಕ್ಷೇತ್ರದ ಗ್ರಾಮೀಣ ರಸ್ತೆ ನಿರ್ಮಾಣ ಹಾಗೂ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡಲು ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಮಾನ್ಯ ಮುಖ್ಯ ಮಂತ್ರಿಯವರನ್ನು ಕೋರಿದ್ದು, ಮಾನ್ಯ ಮುಖ್ಯ ಮಂತ್ರಿಯವರು ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಹಾಸನ ಜಿಲ್ಲೆ ಅರಸೀಕೆರೆ ಕ್ಷೇತ್ರಕ್ಕೆ ಗ್ರಾಮೀಣ ರಸ್ತೆಗಳ ಕಾಮಗಾರಿಗಳಿಗೆ ರೂ.2.10 ಕೋಟಿಗಳ ಅನುದಾನ ಬಿಡುಗಡೆ ಮಾಡಲು ಅನುಮೋದಿಸಿ ಆರ್ಥಿಕ ಇಲಾಖೆಗೆ ಕಡತ ಸಲ್ಲಿಸಲಾಗಿದೆ.

ಇಂತಹ ಕಾಮಗಾರಿಗಳ ವೆಚ್ಚ ಭರಿಸಲು 2017-18ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ:3054-80-196-1-03-300 ಲಂಪ್‌ಸಮ್ ಅಡಿ BE ರೂ.10510.80 ಲಕ್ಷಗಳನ್ನು ಒದಗಿಸಲಾಗಿದೆ. ಆದ್ದರಿಂದ ಮಾನ್ಯ ಮುಖ್ಯ ಮಂತ್ರಿಯವರ ಸೂಚಿಸಿದಂತೆ ವಿಶೇಷ ಪ್ರಕರಣವೆಂದು ಪರಿಗಣಿಸಿ ರೂ.210.00 ಲಕ್ಷ ಪ್ರಸ್ತುತ ಸಾಲಿನಲ್ಲಿ ಒದಗಿಸಲಾಗಿರುವ ಆಯವ್ಯಯದಲ್ಲಿ ಬಿಡುಗಡೆ ಮಾಡಲು ತಿಳಿಸುತ್ತಾ, ಈ ಬಗ್ಗೆ ಸೂಕ್ತ ಕ್ರಿಯಾ ಯೋಜನೆ ರೂಪಿಸಿ ಕಾಮಗಾರಿಯ ಪ್ರಗತಿಯನ್ನಾಧರಿಸಿ ಹಂತ ಹಂತವಾಗಿ ವೆಚ್ಚ ಭರಿಸಲು ಆಡಳಿತ ಇಲಾಖೆಗೆ ತಿಳಿಸಿದೆ ಎಂಬುದಾಗಿ ಅಭಿಪ್ರಾಯ ನೀಡಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಅರಸೀಕೆರೆ ವಿಧಾನ ಸಭಾ ಕ್ಷೇತ್ರದ ಮಾನ್ಯ ಶಾಸಕರು ಸೂಚಿಸುವ ಹಾಸನ ಜಿಲ್ಲೆ ಅರಸೀಕೆರೆ ಮತಕ್ಷೇತ್ರದ ವ್ಯಾಪ್ತಿಯಲ್ಲಿನ ಗ್ರಾಮೀಣ ರಸ್ತೆಗಳು ಹಾಗೂ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗಳನ್ನು ರೂ.210.00 ಲಕ್ಷಗಳಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:221:ಆರ್‌ಆರ್‌ಸಿ:2017 ಬೆಂಗಳೂರು, ದಿನಾಂಕ:9-6-2017.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಅರಸೀಕೆರೆ ವಿಧಾನ ಸಭಾ ಕ್ಷೇತ್ರದ ಮಾನ್ಯ ಶಾಸಕರು ಸೂಚಿಸುವ ಹಾಸನ ಜಿಲ್ಲೆ ಅರಸೀಕೆರೆ ಮತಕ್ಷೇತ್ರದ ವ್ಯಾಪ್ತಿಯಲ್ಲಿನ ಗ್ರಾಮೀಣ ರಸ್ತೆಗಳು ಹಾಗೂ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗಳನ್ನು ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ-3054-80-196-1-03-300 ಲಂಪ್‌ಸಮ್ ಅಡಿ **ರೂ.210.00**ಲಕ್ಷಗಳ (ರೂಪಾಯಿಗಳು ಎರಡು ನೂರ ಹತ್ತು ಲಕ್ಷಗಳು ಮಾತ್ರ) ಅನುದಾನದಲ್ಲಿ ಕೈಗೊಳ್ಳಲು ಕೆಳಕಂಡ ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು:**

1. ಅರಸೀಕೆರೆ ವಿಧಾನ ಸಭಾ ಕ್ಷೇತ್ರದ ಮಾನ್ಯ ಶಾಸಕರು ಸೂಚಿಸುವ ಹಾಸನ ಜಿಲ್ಲೆ ಅರಸೀಕೆರೆ ಮತಕ್ಷೇತ್ರದ ವ್ಯಾಪ್ತಿಯಲ್ಲಿನ ಗ್ರಾಮೀಣ ರಸ್ತೆಗಳು ಹಾಗೂ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗಳನ್ನು ತುರ್ತು ಹಾಗೂ ಅಗತ್ಯತೆ ಆಧಾರದ ಮೇರೆಗೆ ಹಂಚಿಕೆ ಮಿತಿಗೊಳಪಟ್ಟು ಕೆಆರ್‌ಐಡಿಎಲ್(ಕ್ರೆಡಿಲ್) ವಿಭಾಗದಿಂದ ಅನುಷ್ಠಾನಗೊಳಿಸತಕ್ಕದ್ದು.

2. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯನ್ನು ಜಿಲ್ಲಾ ಪಂಚಾಯತಿ/ಕೆಆರ್ಐಡಿಎಲ್, ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ ಲೆಕ್ಕ ಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆ ಯಾಗಿರುವುದಿಲ್ಲವೆಂಬ ಅಂಶವನ್ನು ದೃಢಪಡಿಸಿಕೊಳ್ಳತಕ್ಕದ್ದು.

3. ಕರ್ನಾಟಕ ಪಾರದರ್ಶಕತೆ ನಿಯಮ 4 ಜಿ ವಿನಾಯಿತಿ ಇಲ್ಲದಿದ್ದಲ್ಲಿ ಕಾಮಗಾರಿಗಳನ್ನು ಕರ್ನಾಟಕ ಪಾರದರ್ಶಕತೆ ಕಾಯಿದೆ ಪ್ರಕಾರ ಟೆಂಡರ್ ಕರೆದು ನಿರ್ವಹಿಸುವುದು.

4. ಈ ಯೋಜನೆಯಡಿಯ ಎಲ್ಲಾ ಕಾಮಗಾರಿಗಳ ಬಳಕೆಯಾದ ಹಣ ಕುರಿತಂತೆ ಮಾಹಿತಿಯನ್ನು ಸರ್ಕಾರಕ್ಕೆ ಹಾಗೂ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗೆ ನೀಡುವುದು.

5. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯ ಅಂದಾಜನ್ನು ನಿಯಮಾನುಸಾರ IRC ಮತ್ತಿತರೆ ತತ್ಸಮಾನ ತಾಂತ್ರಿಕ ನಿಬಂಧನೆಗಳಂತೆ ಪರಿಶೀಲನೆಗೆ ಒಳಪಡಿಸಿ ಸೂಕ್ತ ಪ್ರಾಧಿಕಾರದಿಂದ ಅನುಮೋದನೆ ಪಡೆಯತಕ್ಕದ್ದು.

6. ಕಾಮಗಾರಿ ಪ್ರಾರಂಭಿಸುವ ಮುನ್ನ ಮತ್ತು ಮುಕ್ತಾಯದ ನಂತರ ರಸ್ತೆಯ ಸನ್ನಿವೇಶದ ಛಾಯಾ ಚಿತ್ರಗಳನ್ನು ತೆಗೆದು ವೆಬ್‌ಸೈಟ್ ನಲ್ಲಿ ಅಳವಡಿಸತಕ್ಕದ್ದು.

7. ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿರುವ ಹೆಚ್ಚುವರಿ ರಸ್ತೆ ಕಾಮಗಾರಿಗಳನ್ನು Worksoft works monitoring ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು Worksoft website ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.

8. ಕಾಮಗಾರಿಗಳ ಗುಣಮಟ್ಟ ಪರೀಕ್ಷೆಯನ್ನು ಕೆಆರ್ಆರ್‌ಡಿಎ ವತಿಯಿಂದ ನಿಗದಿಪಡಿಸಿರುವ DQM/SQM ಗಳಿಂದ ಪರಿವೀಕ್ಷಣೆ ಮಾಡಿಸತಕ್ಕದ್ದು.

9. ಕಾಮಗಾರಿಗಳನ್ನು 3rd party /SQM/DQM ರವರಿಂದ ತಪಾಸಣೆಗೆ ಒಳಪಡಿಸತಕ್ಕದ್ದು.

10. 2014–15ನೇ ಸಾಲಿನಿಂದ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈಗಾಗಲೇ ಸೂಚಿಸಲಾಗಿದೆ. ಅದರಂತೆ, ಪ್ರಸ್ತುತ ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವ ನಿಬಂಧನೆಗೊಳಪಡಿಸಿದೆ.

11. ಈ ಆದೇಶದಂತೆ ಜಿಲ್ಲಾ ಪಂಚಾಯತಿ/ಕೆಆರ್ಐಡಿಎಲ್ ಅನುಷ್ಠಾನಗೊಳಿಸಿದ ಕಾಮಗಾರಿಗಳಿಗೆ ತಾಲ್ಲೂಕುವಾರು ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ಇಲಾಖೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ರವರ ಮುಖಾಂತರ ಸರ್ಕಾರಕ್ಕೆ ನೀಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ/92/ವೆಚ್ಚ-6/2017 ದಿನಾಂಕ: 16-5-2017ರ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ.ಬೂವನಹಳ್ಳಿ ನಾಗರಾಜ್)
ನಿರ್ದೇಶಕರು, ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
8. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿಗಳು(ಪಂರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಇಲಾಖೆ, ಬೆಂಗಳೂರು.
10. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
14. ಜಿಲ್ಲಾ ಖಜಾನಾಧಿಕಾರಿಗಳು, ಹಾಸನ ಜಿಲ್ಲೆ.
15. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
16. ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಿಲ್ ಸಂಸ್ಥೆ, ಬೆಂಗಳೂರು.
16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9
17. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ
18. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಮೈಸೂರು
19. ಕಾರ್ಯಪಾಲಕ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ಕ್ರೆಡಿಲ್ ವಿಭಾಗ, ಹಾಸನ/ಚನ್ನರಾಯಪಟ್ಟಣ
20. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ
21. ರಕ್ಷಾ ಕಡತ / ಹೆಚ್ಚುವರಿ ಪ್ರತಿ.